**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀಯುತರುಗಳಾದ ಶ್ರೀ ಪುಟ್ಟಣ್ಣ, ಶ್ರೀ ಎಸ್.ವಿ.ಸಂಕನೂರು, ಶ್ರೀ ಮರಿತ್ತಿಬೇಗೌಡ, ಶ್ರೀ ಎಸ್.ಎಲ್.ಬೋಜೇಗೌಡ, ಶ್ರೀ ನಿರಾಣಿ ಹಣಮಂತ್ ರುದ್ರಪ್ಪ ಮತ್ತು ಶ್ರೀ ಮಧು ಜಿ ಮಾದೇಗೌಡ ಇವರುಗಳು ನಿಯಮ 330ರ ಅಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರಿಸುವ ಕುರಿತು.**

## ವಿಷಯ

1987-95ರ ಅವಧಿಯಲ್ಲಿ ಪ್ರಾರಂಭವಾಗಿರುವ ಶಾಲಾ ಕಾಲೇಜುಗಳನ್ನು ಸರ್ಕಾರವು ಅನುದಾನಕ್ಕೊಳಪಡಿಸಲು 2006-07ನೇ ಸಾಲಿನಲ್ಲಿ ಆದೇಶವಾಗಿರುತ್ತದೆ. ಸದರಿ ಆದೇಶದಂತೆ 1994-95ನೇ ಸಾಲಿನಲ್ಲಿ ಪ್ರಾರಂಭವಾಗಿ ಉತ್ತಮವಾದ ಮೂಲಭೂತ ಸೌಲಭ್ಯಗಳನ್ನು ಒಳಗೊಂಡಿರುವ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲಾಗುತ್ತಿತ್ತು. ಆದರೆ ಇತ್ತೀಚೆಗೆ ಕೋವಿಡ್ -19 ಕಾರಣದಿಂದ ವೇತನಾನುದಾನಕ್ಕೆ ಒಳಪಡಿಸುವುದನ್ನು ನಿಲ್ಲಿಸಲಾಗಿದೆ. ಸದರಿ ಅವಧಿಯಲ್ಲಿ ಪ್ರಾರಂಭವಾಗಿ ಸತತವಾಗಿ ನಡೆದುಕೊಂಡು ಬರುತ್ತಿರುವ ಹಲವಾರು ಶಾಲಾ ಕಾಲೇಜುಗಳ ವೇತನಾನುದಾಕ್ಕೊಳಪಡಿಸುವ ಕಡತಗಳು ಶಿಕ್ಷಣ ಇಲಾಖೆಯ ಕಾರ್ಯದರ್ಶಿಗಳ ಕಛೇರಿಯಲ್ಲಿ ಬಾಕಿ ಉಳಿದುಕೊಂಡಿವೆ. ಮತ್ತು ಇಲಾಖೆಯ ವಿವಿಧ ಹಂತಗಳಲ್ಲಿವೆ. ಈ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರು ಈಗಾಗಲೇ ವಯೋಮಿತಿ ಮೀರುವ ಹಂತದಲಿದ್ದಾರೆ. ಆದ್ದರಿಂದ 1994-95ನೇ ಸಾಲಿನವರೆಗೆ ಪ್ರಾರಂಭವಾಗಿ ಸತತವಾಗಿ ನಡೆಯುತ್ತಿರುವ ಎಲ್ಲ ಕನ್ನಡ ಮಾಧ್ಯಮ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಿ ಆದೇಶ ಹೊರಡಿಸಬೇಕೆಂಬ ವಿಷಯವನ್ನು ನಿಯಮ 330ರಲ್ಲಿ ಮಾನ್ಯ ಮುಖ್ಯಮಂತ್ರಿಯವರಲ್ಲಿ ಪ್ರಸ್ತಾಪಿಸುತ್ತೇನೆ.

## ಉತ್ತರ

ರಾಜ್ಯ ಸರ್ಕಾರ 1987 ರಿಂದ 1994-95ನೇ ಸಾಲಿನಲ್ಲಿ ಪ್ರಾರಂಭವಾದ ಖಾಸಗಿ ಅನುದಾನ ರಹಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳನ್ನು ವೇತನ ಅನುದಾನಕ್ಕೆ ಒಳಪಡಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. ಈ ಅವಧಿಯಲ್ಲಿ ಪ್ರಾರಂಭವಾದ ಶಾಲೆಗಳು ಸರ್ಕಾರದ ಸಹಾಯಾನುದಾನಕ್ಕೆ ಒಳಪಡಿಸಲು ಬಾಕಿಯಿರುವ ಸುಮಾರು 114 ಶಾಲೆಗಳ ಅರ್ಹ ಪ್ರಸ್ತಾವನೆಗಳು ಸರ್ಕಾರದ ಹಂತದಲ್ಲಿ ಇರುತ್ತವೆ. ದಿನಾಂಕ: 21.12.2021 ರಂದು ಸುವರ್ಣ ಸೌಧ, ಬೆಳಗಾವಿ ಅಧಿವೇಶನದ ಸಂದರ್ಭದಲ್ಲಿ ಕರ್ನಾಟಕ ವಿಧಾನ ಪರಿಷತ್‌ನ ಸಭಾಪತಿಯವರ ಅಧ್ಯಕ್ಷತೆಯಲ್ಲಿ ಮತ್ತು ಮಾನ್ಯ ಮುಖ್ಯಮಂತ್ರಿಗಳ ಘನ ಉಪಸ್ಥಿತಿಯಲ್ಲಿ ಹಾಗೂ ಇಲಾಖಾ ಅಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ 1995ರ ಪೂರ್ವದಲ್ಲಿ ಪ್ರಾರಂಭವಾದ ಶಾಲೆಗಳನ್ನು ವೇತನ ಅನುದಾನಕ್ಕೆ ಒಳಪಡಿಸಲು ಸೂಚಿಸಿ, ಶಿಕ್ಷಣ ಇಲಾಖೆ ಮತ್ತು ಆರ್ಥಿಕ ಇಲಾಖೆಗೆ ನಿರ್ದೇಶನ ನೀಡಲಾಗಿತ್ತು. ಅದರಂತೆ ಶಿಕ್ಷಣ ಇಲಾಖೆಯ ಕಡತ ಸಂಖ್ಯೆ:ಇಪಿ:117:ಪಿಎಂಸಿ:2022 ರಲ್ಲಿ 77 ಪ್ರಾಥಮಿಕ ಶಾಲೆಗಳು, 05 ಅರೇಬಿಕ್ ಶಾಲೆಗಳು, 31 ಪ್ರೌಢ ಶಾಲೆಗಳು ಮತ್ತು 01 ಅರೇಬಿಕ್ ಕಾಲೇಜು ಸೇರಿದಂತೆ ಒಟ್ಟು 114 ಶಾಲಾ/ಕಾಲೇಜುಗಳ 547 ಶಿಕ್ಷಕ/ಉಪನ್ಯಾಸಕ ಹುದ್ದೆಗಳನ್ನು ಹಾಗೂ 29 ದ್ವಿ.ದ.ಸ ಹುದ್ದೆಗಳನ್ನು ಸಹಾಯಾನುದಾನಕ್ಕೆ ಒಳಪಡಿಸುವ ಕುರಿತಂತೆ ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿತ್ತು.

ದಿನಾಂಕ: 19-01-2023ರಂದು ಆರ್ಥಿಕ ಇಲಾಖೆಯು ನೀಡಿರುವ ಹಿಂಬರಹದ ಉದ್ಧೃತ ಭಾಗ ಈ ಕೆಳಕಂಡಂತಿರುತ್ತದೆ.

> "ರಾಜ್ಯ ಸರ್ಕಾರವು ಈಗಾಗಲೇ ಸಹಾಯಾನುದಾನಕ್ಕೆ ಒಳಪಟ್ಟಿರುವ ಖಾಸಗಿ ಅನುದಾನಿತ ಶಾಲಾ/ಕಾಲೇಜುಗಳ ಸಿಬ್ಬಂದಿಯ ವೇತನಕ್ಕಾಗಿ ವಾರ್ಷಿಕ ರೂ. 1800.00 ಕೋಟಿಗಳಿಗೂ ಹೆಚ್ಚು ಹಣವನ್ನು ವೆಚ್ಚ ಮಾಡುತ್ತಿದೆ. ರಾಜ್ಯ ಸರ್ಕಾರವು ಪ್ರಸ್ತುತ ರಾಜಸ್ವ ಕೊರತೆಯತ್ತ ಸಾಗುತ್ತಿದ್ದು ಆರ್ಥಿಕ ಸಂಕಷ್ಟವನ್ನು ಎದುರಿಸುವತ್ತಿದೆ. ಸರ್ಕಾರಿ ಶಾಲೆಗಳಲ್ಲಿ ಇರುವ ಸಾಮರ್ಥ್ಯವನ್ನು ಸಂಪೂರ್ಣ/ಪರಿಣಾಮಕಾರಿಯಾಗಿ ಬಳಸಿಕೊಳ್ಳಲಾಗುತ್ತಿಲ್ಲ.
>
> ಮೇಲ್ಕಂಡ ಹಿನ್ನೆಲೆಯಲ್ಲಿ, ಆಡಳಿತ ಇಲಾಖೆ ಪ್ರಸ್ತುತ ಸಲ್ಲಿಸಿರುವ 114 ಖಾಸಗಿ ಶಾಲಾ/ಕಾಲೇಜುಗಳನ್ನು ಸಹಾಯಾನುದಾನ್ಕಕೆ ಒಳಪಡಿಸುವ ಪ್ರಸ್ತಾವನೆಯನ್ನು ಒಪ್ಪಲು ಸಾಧ್ಯವಿರುವುದಿಲ್ಲ".

ಆರ್ಥಿಕ ಇಲಾಖೆಯು ಹಿಂಬರಹ ನೀಡಿ ಹಿಂದಿರುಗಿಸಲಾಗಿದ್ದ ಕಡತವನ್ನು ಮಾನ್ಯ ಕರ್ನಾಟಕ ರಾಜ್ಯ ವಿಧಾನ ಪರಿಷತ್ತಿನ ಸಭಾಪತಿಯವರ ಟಿಪ್ಪಣಿಯಲ್ಲಿ ಕೋರಿರುವಂತೆ, 1987 ರಿಂದ 1994-95ನೇ ಸಾಲಿನಲ್ಲಿ ಪ್ರಾರಂಭವಾದ ಖಾಸಗಿ ಅನುದಾನ ರಹಿತ 114 ಪ್ರಾಥಮಿಕ ಮತ್ತು ಪ್ರೌಢಶಾಲೆಗಳನ್ನು ವೇತನ ಅನುದಾನಕ್ಕೆ ಒಳಪಡಿಸುವ ಕುರಿತಾದ ಸದರಿ ಕಡತವನ್ನು ಮತ್ತೊಮ್ಮೆ ಆರ್ಥಿಕ ಇಲಾಖೆಗೆ ಕಳುಹಿಸಲಾಗಿದ್ದು, ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ.

ಇಪಿ 36 ಪಿಎಂಸಿ 2023

(ಬಿ.ಸಿ. ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು.